# ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ, ದೇವನಹಳ್ಳಿ

ನಂ. 333/1, ಮೊದಲನೇ ಮಹಡಿ, ವಿ.ಜಿ. ಕಾಂಪ್ಲೆಕ್ಸ್, ಶಾಂತಿನಗರ, ಸೂಲಿಬೆಲೆ ರಸ್ತೆ, ದೇವನಹಳ್ಳಿ ಟೌನ್, ಬೆಂಗಳೂರು ಗ್ರಾಮಾಂತರ ಜಿಲ್ಲೆ-562110
ದೂ. : 080-29566001, 080-27682035 ಇಮೇಲ್ : biaapa.devanahalli@gmail.com ವೆಬ್‌ಸೈಟ್ : www.biaapa.tpa.gov.in

## "ತಾತ್ಕಾಲಿಕ ಪರಿಷ್ಕೃತ ವಸತಿ ವಿನ್ಯಾಸ ನಕ್ಷೆ ಅನುಮೋದನೆ ಪತ್ರ"

ವಿಷಯ : ದೇವನಹಳ್ಳಿ ತಾಲ್ಲೂಕು, ವಿಜಯಪುರ ಹೋಬಳಿ, ಚಿಕ್ಕತತ್ತಮಂಗಲ ಗ್ರಾಮದ ಸರ್ವೆ ನಂ. 114/1 ರಲ್ಲಿ 0ಎ-29ಗು, 114/2 ರಲ್ಲಿ 1ಎ-11ಗು, 120 ರಲ್ಲಿ 4ಎ-38ಗು, 138 ರಲ್ಲಿ 2ಎ-00ಗು ಒಟ್ಟು 8ಎ-38ಗು ಅಥವಾ 36218.86 ಚ.ಮೀ ವಿಸ್ತೀರ್ಣ ಪ್ರದೇಶಕ್ಕೆ ಪ್ರಾಧಿಕಾರದಿಂದ ತಾತ್ಕಾಲಿಕ ಅನುಮೋದಿತ ವಸತಿ ವಿನ್ಯಾಸದಲ್ಲಿ ಕೆಲವೊಂದು ಮಾರ್ಪಾಡುಗಳನ್ನು ಅಳವಡಿಸಿರುವ ಕಾರಣ ಪರಿಷ್ಕೃತ ವಸತಿ ವಿನ್ಯಾಸ ನಕ್ಷೆಗೆ ತಾತ್ಕಾಲಿಕ ಅನುಮೋದನೆ ನೀಡಲು ಕೋರಿರುವ ಬಗ್ಗೆ.

ಉಲ್ಲೇಖ :

1) ಅರ್ಜಿದಾರರಾದ ಶ್ರೀ ಆರ್.ಕೇಶವ ಬಿನ್ ಪಿ.ರಾಮಚಂದ್ರಪ್ಪ ರವರು ಸಲ್ಲಿಸಿರುವ ಅರ್ಜಿ ಸಂಖ್ಯೆ: 4412, ದಿನಾಂಕ: 07/10/2022.
2) ಸರ್ಕಾರದ ಆದೇಶ ಸಂಖ್ಯೆ: ನಅಇ 119 ಬಿಎಂಆರ್ 2022, ಬೆಂಗಳೂರು, ದಿನಾಂಕ: 14/07/2022.
3) ಈ ಪ್ರಾಧಿಕಾರದ ಭೂಉಪಯೋಗ ಬದಲಾವಣೆ ಆದೇಶದ ಸಂಖ್ಯೆ: ಬಿಐಎಪಿಎ/ಟಿಪಿ/ಭೂಉಬ/35/2021-22/1081, ದಿ:26/08/2022.
4) ಜಿಲ್ಲಾಧಿಕಾರಿಗಳು, ಬೆಂಗಳೂರು ನಗರ ಜಿಲ್ಲೆ ರವರ ಅಧಿಕೃತ ಜ್ಞಾಪನ ಪತ್ರ ಸಂಖ್ಯೆ: ನಂ.195339, ದಿನಾಂಕ: 10/12/2020 (ಸ.ನಂ. 114/1), ನಂ.396139, ದಿನಾಂಕ: 08/09/2022 (ಸ.ನಂ 114/2), ನಂ. 292352, ದಿನಾಂಕ: 13/01/2022 (ಸ.ನಂ 120) & ನಂ. ಡಿಎಂಡಿ 398024965298ಎಫ್ ದಿನಾಂಕ: 26/07/2019 (ಸ.ನಂ. 138).
5) ದಿನಾಂಕ: 29/11/2022 ರಂದು ನಡೆದ ಪ್ರಾಧಿಕಾರದ 135 ನೇ ಸಭೆಯ ವಿಷಯ ಸಂ. 135.79 ರ ನಡಾವಳಿ.
6) ಈ ಪ್ರಾಧಿಕಾರದ ಸಮ ಸಂಖ್ಯೆಯ ಶುಲ್ಕ ಪಾವತಿ ಸೂಚನಾ ಪತ್ರ ದಿನಾಂಕ: 27/12/2022.
7) ಅರ್ಜಿದಾರರು ಶುಲ್ಕಗಳನ್ನು ಪಾವತಿಸಿದ ರಶೀದಿ ಸಂಖ್ಯೆ: 0011912, ದಿನಾಂಕ: 07/01/2023 ರಂತೆ ರೂ. 32,70,650/- (ಮೂವತ್ತೆರಡು ಲಕ್ಷದ ಎಪ್ಪತ್ತು ಸಾವಿರದ ಆರುನೂರ ಐವತ್ತು ರೂಪಾಯಿಗಳು ಮಾತ್ರ) ರಂತೆ ಶುಲ್ಕಗಳನ್ನು ಪಾವತಿಸಿರುತ್ತಾರೆ.
8) ಈ ಪ್ರಾಧಿಕಾರದ ಸಮ ಸಂಖ್ಯೆ ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆ ಅನುಮೋದನೆ ಪತ್ರ ದಿನಾಂಕ: 07/01/2023.
9) ಅರ್ಜಿದಾರರಾದ ಮೆ॥ ಬ್ಲ್ಯೂಸ್ಟೋನ್ ಪ್ರಾಪರ್ಟೀಸ್ ರ ಪರವಾಗಿ ಪಾಲುದಾರರಾದ ಶ್ರೀ ಸುನಿಲ್ ಎ ಬಿನ್ ಎನ್.ಆಂಜಿನಪ್ಪ ಹಾಗೂ ಭೂ ಮಾಲೀಕರಾದ ಶ್ರೀ ಕೇಶವ ಬಿನ್ ಪಿ.ರಾಮಚಂದ್ರಪ್ಪ ರವರ ಪರವಾಗಿ ನೋಂದಾಯಿತ ಜಿಪಿಎದಾರರು ಮೆ॥ ಬ್ಲ್ಯೂಸ್ಟೋನ್ ಪ್ರಾಪರ್ಟೀಸ್ ರ ಪರವಾಗಿ ಪಾಲುದಾರರಾದ ಶ್ರೀ ಸುನಿಲ್ ಎ ಬಿನ್ ಎನ್.ಆಂಜಿನಪ್ಪ ರವರು ಪರಿಷ್ಕೃತ ವಿನ್ಯಾಸ ನಕ್ಷೆ ಅನುಮೋದನೆಗಾಗಿ ಸಲ್ಲಿಸಿರುವ ಮನವಿ ಪತ್ರ ದಿನಾಂಕ: 15/09/2025.
10) ಪರಿಷ್ಕೃತ ವಸತಿ ವಿನ್ಯಾಸ ನಕ್ಷೆಗೆ ತಾತ್ಕಾಲಿಕ ಅನುಮೋದನೆ ನೀಡುವ ಸಂಬಂಧ ಪೂರ್ವ ಸಮ್ಮತಿಗಾಗಿ ಮಹಾನಗರ ಯೋಜಕರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ ರವರಿಗೆ ಕಡತ ಸಲ್ಲಿಸಿದ ದಿನಾಂಕ: 18/10/2025.

11) ಮಹಾನಗರ ಯೋಜಕರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ ರವರು ಸಮ್ಮತಿ ನೀಡಿದ ದಿನಾಂಕ: 21/10/2025.
12) ದಿನಾಂಕ: 27/10/2025 ರಂದು ನಡೆದ ಪ್ರಾಧಿಕಾರದ 148 ನೇ ಸಭೆಯ ವಿಷಯ ಸಂ. 148.74 ರ ನಡಾವಳಿ.
13) ಈ ಪ್ರಾಧಿಕಾರದ ಶುಲ್ಕ ಪಾವತಿ ಸೂಚನಾ ಪತ್ರ ದಿನಾಂಕ: 17/11/2025.
14) ಅರ್ಜಿದಾರರು ಶುಲ್ಕಗಳನ್ನು ಪಾವತಿಸಿರುವ ರಸೀದಿ ಸಂಖ್ಯೆ: 0015301 ದಿನಾಂಕ: 03/12/2025 ರಲ್ಲಿ ರೂ. 36,220/- (ಮೂವತ್ತಾರು ಸಾವಿರದ ಎರಡು ನೂರ ಇಪ್ಪತ್ತು ರೂಪಾಯಿಗಳು ಮಾತ್ರ) ಗಳನ್ನು ಈ ಪ್ರಾಧಿಕಾರಕ್ಕೆ ಪಾವತಿಸಿರುತ್ತಾರೆ.
15) ಸರ್ಕಾರದ ಅಧಿಸೂಚನೆ ಸಂಖ್ಯೆ: ನಂಅಇ 24 ಶಾಸನ 2015, ಬೆಂಗಳೂರು ದಿನಾಂಕ: 10/09/2015 ಮತ್ತು ಡಿಪಿಎಲ್ 36 ಶಾಸನ 2021, ಬೆಂಗಳೂರು ದಿನಾಂಕ:07/10/2021

***********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಅರ್ಜಿದಾರರಾದ ಶ್ರೀ ಆರ್.ಕೇಶವ ಬಿನ್ ಪಿ.ರಾಮಚಂದ್ರಪ್ಪ ರವರು ಉಲ್ಲೇಖ (1) ರ ಅರ್ಜಿಯಲ್ಲಿ ದೇವನಹಳ್ಳಿ ತಾಲ್ಲೂಕು, ವಿಜಯಪುರ ಹೋಬಳಿ, ಚಿಕ್ಕತತ್ತಮಂಗಲ ಗ್ರಾಮದ ಸರ್ವೆ ನಂ. 114/1 ರಲ್ಲಿ 0ಎ-29ಗು, 114/2 ರಲ್ಲಿ 1ಎ-11ಗು, 120 ರಲ್ಲಿ 4ಎ-38ಗು, 138 ರಲ್ಲಿ 2ಎ-00ಗು ಒಟ್ಟು 8ಎ-38ಗು ಅಥವಾ 36218.86 ಚ.ಮೀ ವಿಸ್ತೀರ್ಣ ಪ್ರದೇಶಕ್ಕೆ ವಸತಿ ವಿನ್ಯಾಸ ನಕ್ಷೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 17 (2ಎ) ರ ಅಡಿಯಲ್ಲಿ ತಾತ್ಕಾಲಿಕ ಅನುಮೋದನೆ ನೀಡಲು ಕೋರಲಾಗಿತ್ತು.

ಪ್ರಶ್ನಿತ ಜಮೀನುಗಳು ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರದೇಶದ ಅನುಮೋದಿತ ಮಹಾಯೋಜನೆಯಲ್ಲಿ ವಸತಿ ಹಾಗೂ ಭಾಗಶಃ ವ್ಯವಸಾಯ ಭೂಉಪಯೋಗ ವಲಯದಲ್ಲಿ ಇರುತ್ತವೆ. ಅನುಮೋದಿತ ಮಹಾಯೋಜನೆಯಲ್ಲಿ ಪ್ರಸ್ತಾಪಿತ 15.00 ಮೀ & 30.00 ಮೀ ಅಗಲದ ರಸ್ತೆ ಪಂಕ್ತೀಕರಣಗಳು ಇರುತ್ತವೆ. ಸಲ್ಲಿಸಿರುವ ದೃಢೀಕೃತ ಗ್ರಾಮ ನಕ್ಷೆ ಮತ್ತು ಸರ್ವೆ ನಕ್ಷೆ ರೀತ್ಯ ಪ್ರಶ್ನಿತ ಜಮೀನುಗಳ ಪಶ್ಚಿಮಕ್ಕೆ ವಿಜಯಪುರದಿಂದ ಗಡ್ಡದನಾಗೇನಹಳ್ಳಿ ಗ್ರಾಮಕ್ಕೆ ಹೋಗುವ ಹಾಲಿ ರಸ್ತೆ ಪಂಕ್ತೀಕರಣ ಇದ್ದು, ಅನುಮೋದಿತ ಮಹಾಯೋಜನೆಯಲ್ಲಿ ಪ್ರಶ್ನಿತ ಸ.ನಂ 114 ರ ಜಮೀನಿನಲ್ಲಿಯೇ ರಸ್ತೆ ಪಂಕ್ತೀಕರಣ ಗುರುತಿಸಿದ್ದು, ಹಾಲಿ ರಸ್ತೆ ಪಂಕ್ತೀಕರಣ & ಮಹಾಯೋಜನೆಯ ನಕ್ಷೆಯಲ್ಲಿನ ರಸ್ತೆ ಪಂಕ್ತೀಕರಣ (ಪರಿಚಲನೆ) ವ್ಯತ್ಯಾಸವಾಗಿರುತ್ತದೆ. ಇಂತಹ ನ್ಯೂನ್ಯತೆಗಳಿದ್ದಲ್ಲಿ ವಲಯ ನಿಯಮಾವಳಿಯಲ್ಲಿನ ಪುಟ ಸಂ. 75 ರಲ್ಲಿನ ಕಂಡಿಕೆ 'ಜೆ' ರಲ್ಲಿ If the alignment of the existing road is shifted in master plan, the existing road as on ground reality/cadastral map may be considered for the proposed road widening. The land use facing the road shall be considered accordingly ಎಂದು ಸೂಚಿಸಲಾಗಿರುತ್ತದೆ. ಅದರಂತೆ ಪ್ರಶ್ನಿತ ಜಮೀನನ್ನು 'ವಸತಿ, ಭಾಗಶಃ ವ್ಯವಸಾಯ ಹಾಗೂ 30.00 ಮೀ ಅಗಲದ ಪ್ರಸ್ತಾಪಿತ ರಸ್ತೆ' ವಲಯವೆಂದು ಹಾಗೂ ಪ್ರಶ್ನಿತ ಜಮೀನುಗಳಿಗೆ ಲಗತ್ತಾಗಿರುವ ಹಾಲಿ ರಸ್ತೆ ಪಂಕ್ತೀಕರಣದಲ್ಲಿ ಮಹಾಯೋಜನೆಯ 15.00 ಮೀ ಅಗಲದ ಪ್ರಸ್ತಾಪಿತ ರಸ್ತೆ ಪಂಕ್ತೀಕರಣ ಪರಿಗಣಿಸಲಾಗಿದೆ.

ಉಲ್ಲೇಖ (2) ರ ಸರ್ಕಾರದ ಆದೇಶದಂತೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 14(ಎ) ರಡಿಯಲ್ಲಿ ಪ್ರಶ್ನಿತ ಜಮೀನುಗಳ ಪೈಕಿ ವ್ಯವಸಾಯ ವಲಯದಲ್ಲಿರುವ ಸ.ನಂ 114/2 (ಹಳೇ ಸ.ನಂ 114) ರಲ್ಲಿ 1ಎ-11ಗು ವಿಸ್ತೀರ್ಣದ ಜಮೀನನ್ನು ವ್ಯವಸಾಯ ವಲಯದಿಂದ ವಸತಿ ವಲಯಕ್ಕೆ ಭೂಉಪಯೋಗ ಬದಲಾವಣೆಯಾಗಿರುತ್ತದೆ. ಅದರಂತೆ ಉಲ್ಲೇಖ (3) ರಲ್ಲಿ ಈ ಪ್ರಾಧಿಕಾರದಿಂದ ಭೂಉಪಯೋಗ ಬದಲಾವಣೆಗೆ ಸಂಬಂಧಿಸಿದಂತೆ ಆದೇಶ ಪತ್ರವನ್ನು ನೀಡಲಾಗಿರುತ್ತದೆ. ಉಲ್ಲೇಖ (4) ರ ಅಧಿಕೃತ ಜ್ಞಾಪನ

# ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ, ದೇವನಹಳ್ಳಿ

ನಂ. 333/1, ಮೊದಲನೇ ಮಹಡಿ, ವಿ.ಜೆ. ಕಾಂಪ್ಲೆಕ್ಸ್, ಶಾಂತಿನಗರ, ಸೂಲಿಬೆಲೆ ರಸ್ತೆ, ದೇವನಹಳ್ಳಿ ಟೌನ್, ಬೆಂಗಳೂರು ಗ್ರಾಮಾಂತರ ಜಿಲ್ಲೆ-562110
ದೂ. : 080-29566001, 080-27682035 ಇಮೇಲ್ : biaapa.devanahalli@gmail.com ವೆಬ್‌ಸೈಟ್ : www.biaapa.tpa.gov.in


ಪತ್ರಗಳಂತೆ ಜಿಲ್ಲಾಧಿಕಾರಿಗಳು, ಬೆಂಗಳೂರು ಗ್ರಾಮಾಂತರ ಜಿಲ್ಲೆ ರವರಿಂದ ವಸತಿ ಉದ್ದೇಶಕ್ಕಾಗಿ ಭೂಪರಿವರ್ತನೆಯಾಗಿರುತ್ತದೆ.

ಸರ್ಕಾರದ ಅಧಿಸೂಚನೆ ಸಂಖ್ಯೆ: ಸಂವ್ಯಶಾಇ24 ಶಾಸನ2015, ದಿನಾಂಕ: 10/09/2015 ರನ್ವಯ ಕಾಯ್ದೆಗೆ ತಿದ್ದುಪಡಿಯಾಗಿರುವಂತೆ ಕೆಟಿಸಿಪಿ ಕಾಯ್ದೆ 1961 ರ ಪ್ರಕರಣ 17(2)(ಎ) ರಂತೆ ಪರಿಷ್ಕೃತ ವಸತಿ ವಿನ್ಯಾಸ ನಕ್ಷೆಗೆ ತಾತ್ಕಾಲಿಕ ಅನುಮೋದನೆ ನೀಡುವ ಸಂಬಂಧ ಉಲ್ಲೇಖ (5) ರ ದಿನಾಂಕ: 29/11/2022 ರಂದು ನಡೆದ ಪ್ರಾಧಿಕಾರದ 135 ನೇ ಸಭೆಯ ವಿಷಯ ಸಂ. 135.79 ರ ನಡಾವಳಿಯಲ್ಲಿ ಸಲ್ಲಿಸಿರುವ ವಸತಿ ವಿನ್ಯಾಸ ನಕ್ಷೆಯು ವಲಯ ನಿಯಮಾವಳಿಗಳಿಗೆ ಅನುಗುಣವಾಗಿರುವುದನ್ನು ಸಭೆಯಲ್ಲಿ ಗಮನಿಸಿ, ದೇವನಹಳ್ಳಿ ತಾಲ್ಲೂಕು, ವಿಜಯಪುರ ಹೋಬಳಿ, ಚಿಕ್ಕತತ್ತಮಂಗಲ ಗ್ರಾಮದ ಸರ್ವೆ ನಂ. 114/1 ರಲ್ಲಿ 0ಎ-29ಗು, 114/2 ರಲ್ಲಿ 1ಎ-11ಗು, 120 ರಲ್ಲಿ 4ಎ-38ಗು, 138 ರಲ್ಲಿ 2ಎ-00ಗು ಒಟ್ಟು 8ಎ-38ಗು ಅಥವಾ 36218.86 ಚ.ಮೀ ವಿಸ್ತೀರ್ಣದ ಪ್ರದೇಶದಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 17(2)(ಎ)ರ ಅಡಿಯಲ್ಲಿ ವಸತಿ ವಿನ್ಯಾಸ ನಕ್ಷೆಗೆ ಪ್ರಾಧಿಕಾರದ ಸಾಮಾನ್ಯ ಷರತ್ತುಗಳಿಗೆ ಒಳಪಡಿಸಿ ತಾತ್ಕಾಲಿಕ ಅನುಮೋದನೆ ನೀಡಲು ತೀರ್ಮಾನಿಸಲಾಗಿರುತ್ತದೆ.

ಪ್ರಾಧಿಕಾರದ ಸಭೆಯ ನಡಾವಳಿಯ ರೀತ್ಯ ಸದರಿ ವಸತಿ ವಿನ್ಯಾಸ ನಕ್ಷೆಗೆ ತಾತ್ಕಾಲಿಕ ಅನುಮೋದನೆಗೆ ಸಂಬಂಧಿಸಿದಂತೆ, ಉಲ್ಲೇಖ (6) ರ ಶುಲ್ಕ ಪಾವತಿ ಸೂಚನಾ ಪತ್ರದಲ್ಲಿ ನಿಗಧಿತ ಶುಲ್ಕಗಳನ್ನು ಪಾವತಿಸಿ, ಅಗತ್ಯ ದಾಖಲೆಗಳನ್ನು ಸಲ್ಲಿಸುವಂತೆ ಸೂಚಿಸಲಾಗಿರುವ ಹಿನ್ನೆಲೆಯಲ್ಲಿ ಉಲ್ಲೇಖ (7) ರಲ್ಲಿ ಈ ಪ್ರಾಧಿಕಾರಕ್ಕೆ ನಿಗಧಿತ ಶುಲ್ಕಗಳನ್ನು ಪಾವತಿಸಿ, ಪ್ರಸ್ತಾವನೆ ಸಂಬಂಧ ಅಗತ್ಯ ದಾಖಲೆಗಳನ್ನು ಸಲ್ಲಿಸಿರುತ್ತಾರೆ.

ಸರ್ಕಾರದ ಅಧಿಸೂಚನೆ ಸಂಖ್ಯೆ: ನಅಇ/157/ಬಿಎಂಆರ್/2005 ದಿನಾಂಕ: 27/01/2009 ಮತ್ತು ತಿದ್ದುಪಡಿ ಆದೇಶ ದಿನಾಂಕ: 29/01/2009 ರಲ್ಲಿ ಪ್ರಾಧಿಕಾರದ ಸ್ಥಳೀಯ ಯೋಜನಾ ಪ್ರದೇಶಕ್ಕೆ ಅನುಮೋದನೆಗೊಂಡಿರುವ ಮಹಾಯೋಜನೆಯ ವಲಯ ನಿಯಮಾವಳಿಗಳ ಅನುಸಾರ, ಉಲ್ಲೇಖ (5) ರ ಪ್ರಾಧಿಕಾರದ ಸಭೆಯ ನಡಾವಳಿಯ ರೀತ್ಯ ಹಾಗೂ ಉಲ್ಲೇಖ (8) ರ ಸರ್ಕಾರದ ಅಧಿಸೂಚನೆಗಳನ್ವಯ, ದೇವನಹಳ್ಳಿ ತಾಲ್ಲೂಕು, ವಿಜಯಪುರ ಹೋಬಳಿ, ಚಿಕ್ಕತತ್ತಮಂಗಲ ಗ್ರಾಮದ ಸರ್ವೆ ನಂ. 114/1 ರಲ್ಲಿ 0ಎ-29ಗು, 114/2 ರಲ್ಲಿ 1ಎ-11ಗು, 120 ರಲ್ಲಿ 4ಎ-38ಗು, 138 ರಲ್ಲಿ 2ಎ-00ಗು ಒಟ್ಟು 8ಎ-38ಗು ಅಥವಾ 36218.86 ಚ.ಮೀ ವಿಸ್ತೀರ್ಣ ಪ್ರದೇಶಕ್ಕೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 17 (2ಎ) ರನ್ವಯ ವಸತಿ ವಿನ್ಯಾಸ ನಕ್ಷೆಗೆ "ತಾತ್ಕಾಲಿಕ ಅನುಮೋದನೆ" ನೀಡಿ ಆದೇಶಿಸಲಾಗಿರುತ್ತದೆ.

ಉಲ್ಲೇಖ (9) ರಂತೆ ಅರ್ಜಿದಾರರಾದ ಮೆ॥ ಬ್ಲ್ಯೂಸ್ಟೋನ್ ಪ್ರಾಪರ್ಟೀಸ್ ರ ಪರವಾಗಿ ಪಾಲುದಾರರಾದ ಶ್ರೀ ಸುನಿಲ್ ಎ ಬಿನ್ ಎನ್.ಆಂಜಿನಪ್ಪ ಹಾಗೂ ಭೂ ಮಾಲೀಕರಾದ ಶ್ರೀ ಕೇಶವ ಬಿನ್ ಪಿ.ರಾಮಚಂದ್ರಪ್ಪ ರವರ ಪರವಾಗಿ ನೋಂದಾಯಿತ ಜಿಪಿಎದಾರರು ಮೆ॥ ಬ್ಲ್ಯೂಸ್ಟೋನ್ ಪ್ರಾಪರ್ಟೀಸ್ ರ ಪರವಾಗಿ ಪಾಲುದಾರರಾದ ಶ್ರೀ ಸುನಿಲ್ ಎ ಬಿನ್ ಎನ್.ಆಂಜಿನಪ್ಪ ರವರು ಮನವಿ ಪತ್ರವನ್ನು ಸಲ್ಲಿಸಿ, ದೇವನಹಳ್ಳಿ ತಾಲ್ಲೂಕು, ವಿಜಯಪುರ ಹೋಬಳಿ, ಚಿಕ್ಕತತ್ತಮಂಗಲ ಗ್ರಾಮದ ಸರ್ವೆ ನಂ. 114/1 ರಲ್ಲಿ 0ಎ-29ಗು, 114/2 ರಲ್ಲಿ 1ಎ-11ಗು, 120 ರಲ್ಲಿ 4ಎ-38ಗು, 138 ರಲ್ಲಿ 2ಎ-00ಗು ಒಟ್ಟು 8ಎ-38ಗು ಅಥವಾ 36218.86 ಚ.ಮೀ ವಿಸ್ತೀರ್ಣ ಪ್ರದೇಶಕ್ಕೆ ಪ್ರಾಧಿಕಾರದಿಂದ ತಾತ್ಕಾಲಿಕ ಅನುಮೋದಿತ ವಸತಿ ವಿನ್ಯಾಸದಲ್ಲಿನ ಜಮೀನುಗಳ ಮಾಲೀಕತ್ವ ಬದಲಾವಣೆಯಾಗಿರುವುದರಿಂದ ಹಾಗೂ ಸ್ವತ್ತಿನ ಅಳತೆಯಲ್ಲಿ ವ್ಯತ್ಯಾಸವಾಗಿರುವ ಕಾರಣ ಪರಿಷ್ಕೃತ ವಸತಿ ವಿನ್ಯಾಸ ನಕ್ಷೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 17(2ಎ) ರ ಅಡಿಯಲ್ಲಿ ತಾತ್ಕಾಲಿಕ ಅನುಮೋದನೆ ನೀಡಲು ಕೋರಿರುತ್ತಾರೆ.

ಸರ್ಕಾರದ ಅಧಿಸೂಚನೆ ಸಂಖ್ಯೆ : ಯುಡಿಡಿ234ಬಿಎಂಆರ್2023, ದಿನಾಂಕ: 20/11/2023 ರಂತೆ ಅನುಮೋದನೆಯಾದ ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರದ ನಿಯಮಗಳು 2020 ರಲ್ಲಿನ ನಿಯಮ 18 (5) ರನ್ವಯ ಮತ್ತು ದಿನಾಂಕ: 27/12/2023 & 03/02/2024 ರಂದು ಮಹಾನಗರ ಆಯುಕ್ತರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ ಇವರು ಅಧಿಕೃತ ಜ್ಞಾಪನಾ ಪತ್ರದಲ್ಲಿ ಸೂಚಿಸಿರುವಂತೆ ಸದರಿ ಪರಿಷ್ಕೃತ ವಸತಿ ವಿನ್ಯಾಸ ನಕ್ಷೆಗೆ ತಾತ್ಕಾಲಿಕ ಅನುಮೋದನೆ ನೀಡುವ ಸಂಬಂಧ ಪೂರ್ವ ಸಮ್ಮತಿಗಾಗಿ ಉಲ್ಲೇಖ (10)

ರಲ್ಲಿ ಮಹಾನಗರ ಯೋಜಕರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ ರವರನ್ನು ಕೋರಲಾಗಿದ್ದು, ಉಲ್ಲೇಖ (11) ರಂತೆ ಮಹಾನಗರ ಯೋಜಕರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ ರವರು ಹಲವು ಷರತ್ತುಗಳಿಗೆ ಒಳಪಟ್ಟು ಪರಿಷ್ಕೃತ ವಸತಿ ವಿನ್ಯಾಸ ನಕ್ಷೆಗೆ ತಾತ್ಕಾಲಿಕ ಅನುಮೋದನೆ ನೀಡಲು ಸಮ್ಮತಿ ನೀಡಿರುತ್ತಾರೆ.

ಸರ್ಕಾರದ ಅಧಿಸೂಚನೆ ಸಂಖ್ಯೆ: ಸಂವ್ಯಶಾಇ24 ಶಾಸನ2015, ದಿನಾಂಕ: 10/09/2015 ರನ್ವಯ ಕಾಯ್ದೆಗೆ ತಿದ್ದುಪಡಿಯಾಗಿರುವಂತೆ ಕೆಟಿಸಿಪಿ ಕಾಯ್ದೆ 1961 ರ ಪ್ರಕರಣ 17(2)(ಎ) ರಂತೆ ಸದರಿ ಪರಿಷ್ಕೃತ ವಸತಿ ವಿನ್ಯಾಸ ನಕ್ಷೆಗೆ ತಾತ್ಕಾಲಿಕ ಅನುಮೋದನೆ ನೀಡುವ ಸಂಬಂಧ ಉಲ್ಲೇಖ (12) ರ ದಿನಾಂಕ: 27/10/2025 ರಂದು ನಡೆದ ಪ್ರಾಧಿಕಾರದ 148 ನೇ ಸಭೆಯ ವಿಷಯ ಸಂ. 148.74 ರ ನಡಾವಳಿಯಲ್ಲಿ ಅರ್ಜಿದಾರರು ಸಲ್ಲಿಸಿರುವ ಪರಿಷ್ಕೃತ ವಸತಿ ವಿನ್ಯಾಸ ನಕ್ಷೆಯಂತೆ ವಿವಿಧ ಭೂಉಪಯೋಗಗಳ ವಿವರಗಳು ಈ ಕೆಳಕಂಡಂತೆ ಇರುವುದನ್ನು ಸಭೆಯಲ್ಲಿ ಗಮನಿಸಲಾಯಿತು.

| ಕ್ರ. ಸಂ | ಭೂಉಪಯೋಗ | ಸಲ್ಲಿಸಿರುವ ಪರಿಷ್ಕೃತ ವಸತಿ ವಿನ್ಯಾಸ ನಕ್ಷೆಯ ರೀತ್ಯ | | ವಲಯ ನಿಯಮಾವಳಿಗಳ ರೀತ್ಯ ಶೇಕಡವಾರು |
|---|---|---|---|---|
| | | ವಿಸ್ತೀರ್ಣ ಚ.ಮೀ. | ಶೇಕಡಾವಾರು | |
| 1. | ವಸತಿಗಾಗಿ | 19273.71 | 53.21 | ಗರಿಷ್ಠ ಶೇ.55 |
| 2. | ಉದ್ಯಾನವನಕ್ಕಾಗಿ | 3647.18 | 10.07 | ಕನಿಷ್ಠ ಶೇ.05 |
| 3. | ನಾಗರೀಕ ಸೌಲಭ್ಯಕ್ಕಾಗಿ | 1811.13 | 05.00 | ಕನಿಷ್ಠ ಶೇ.10 |
| 4. | ರಸ್ತೆ | 11486.84 | 31.72 | – |
| | ಒಟ್ಟು | **36218.86** | **100** | – |

ಚರ್ಚೆಯ ನಂತರ, ಸಲ್ಲಿಸಿರುವ ಪರಿಷ್ಕೃತ ವಸತಿ ವಿನ್ಯಾಸ ನಕ್ಷೆಯನ್ನು ವಲಯ ನಿಯಮಾವಳಿಗಳಿಗೆ ಅನುಗುಣವಾಗಿ ಪರಿಷ್ಕರಿಸಿಕೊಂಡು, ದೇವನಹಳ್ಳಿ ತಾಲ್ಲೂಕು, ವಿಜಯಪುರ ಹೋಬಳಿ, ಚಿಕ್ಕತತ್ತಮಂಗಲ ಗ್ರಾಮದ ಸರ್ವೆ ನಂ. 114/1 ರಲ್ಲಿ 0ಎ–29ಗು, 114/2 ರಲ್ಲಿ 1ಎ–11ಗು, 120 ರಲ್ಲಿ 4ಎ–38ಗು, 138 ರಲ್ಲಿ 2ಎ–00ಗು ಒಟ್ಟು 8ಎ–38ಗು ಅಥವಾ 36218.86 ಚ.ಮೀ ವಿಸ್ತೀರ್ಣದ ಪ್ರದೇಶದಲ್ಲಿ ಪರಿಷ್ಕೃತ ವಸತಿ ವಿನ್ಯಾಸ ನಕ್ಷೆಗೆ ಪ್ರಾಧಿಕಾರದ ಸಾಮಾನ್ಯ ಷರತ್ತುಗಳಿಗೆ ಒಳಪಡಿಸಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 17 (2ಎ) ರ ಅಡಿಯಲ್ಲಿ ಪರಿಷ್ಕೃತ ವಸತಿ ವಿನ್ಯಾಸ ನಕ್ಷೆಗೆ "Demarcation & Development" ಉದ್ದೇಶಕ್ಕೆ ತಾತ್ಕಾಲಿಕ ಅನುಮೋದನೆಯನ್ನು ನೀಡಲು ತೀರ್ಮಾನಿಸಲಾಯಿತು. ಹಾಗೂ ಅರ್ಜಿದಾರರು ಪರಿಷ್ಕೃತ ವಸತಿ ವಿನ್ಯಾಸದಲ್ಲಿನ ಮೊದಲನೇ ಹಂತದ ಶೇ 40 ರಷ್ಟು ನಿವೇಶನಗಳನ್ನು ಬಿಡುಗಡೆ ಪಡೆಯಲು ಇಚ್ಛಿಸಿದ್ದಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 17(2)(ಸಿ) ರ ಅಡಿಯಲ್ಲಿ ಮೊದಲನೇ ಹಂತದ ಶೇ 40 ರಷ್ಟು ನಿವೇಶನಗಳನ್ನು ನೋಂದಣಿಗಾಗಿ ಬಿಡುಗಡೆ ಮಾಡಲು ಸಹ ತೀರ್ಮಾನಿಸಲಾಗಿರುತ್ತದೆ.

ಪ್ರಾಧಿಕಾರದ ಸಭೆಯ ನಡಾವಳಿಯ ರೀತ್ಯ ಪರಿಷ್ಕೃತ ವಸತಿ ವಿನ್ಯಾಸ ನಕ್ಷೆಗೆ ತಾತ್ಕಾಲಿಕ ಅನುಮೋದನೆ ನೀಡುವ ಸಂಬಂಧ ಉಲ್ಲೇಖ (13) ರ ಈ ಕಛೇರಿಯ ಶುಲ್ಕ ಪಾವತಿ ಸೂಚನಾ ಪತ್ರದಲ್ಲಿ ಅಗತ್ಯ ಶುಲ್ಕಗಳನ್ನು ಪಾವತಿಸುವಂತೆ ಹಾಗೂ ಅಗತ್ಯ ದಾಖಲೆಗಳೊಂದಿಗೆ ಪರಿಷ್ಕೃತ ವಸತಿ ವಿನ್ಯಾಸ ನಕ್ಷೆಯ ನೀಲಿ ಪ್ರತಿಗಳನ್ನು ಸಲ್ಲಿಸಲು ಸೂಚಿಸಲಾಗಿರುವ ಮೇರೆಗೆ ಅರ್ಜಿದಾರರು ಪ್ರಾಧಿಕಾರಕ್ಕೆ ಉಲ್ಲೇಖ (14) ರಲ್ಲಿ ಈ ಪ್ರಾಧಿಕಾರಕ್ಕೆ ನಿಗಧಿತ ಶುಲ್ಕಗಳನ್ನು ಪಾವತಿಸಿ, ಪ್ರಸ್ತಾವನೆ ಸಂಬಂಧ ಅಗತ್ಯ ದಾಖಲೆಯೊಂದಿಗೆ ಪರಿಷ್ಕೃತ ವಿನ್ಯಾಸ ನಕ್ಷೆಯ ನೀಲಿ ಪ್ರತಿಗಳನ್ನು ಸಲ್ಲಿಸಿರುತ್ತಾರೆ.

ಮೇಲ್ಕಂಡ ಅಂಶಗಳನ್ವಯ ಸರ್ಕಾರದ ಅಧಿಸೂಚನೆ ಸಂಖ್ಯೆ: ನಅಇ/157/ಬಿಎಂಆರ್/2005 ದಿನಾಂಕ: 27/01/2009 ಮತ್ತು ತಿದ್ದುಪಡಿ ಆದೇಶ ದಿನಾಂಕ: 29/01/2009 ರಲ್ಲಿ ಪ್ರಾಧಿಕಾರದ ಸ್ಥಳೀಯ ಯೋಜನಾ ಪ್ರದೇಶಕ್ಕೆ ಅನುಮೋದನೆಗೊಂಡಿರುವ ಮಹಾಯೋಜನೆಯ ವಲಯ ನಿಯಮಾವಳಿಗಳ ಅನುಸಾರ, ಉಲ್ಲೇಖ (12)

# ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ, ದೇವನಹಳ್ಳಿ

ನಂ. 333/1, ಮೊದಲನೇ ಮಹಡಿ, ವಿ.ಜೆ. ಕಾಂಪ್ಲೆಕ್ಸ್, ಶಾಂತಿನಗರ, ಸೂಲಿಬೆಲೆ ರಸ್ತೆ, ದೇವನಹಳ್ಳಿ ಟೌನ್, ಬೆಂಗಳೂರು ಗ್ರಾಮಾಂತರ ಜಿಲ್ಲೆ-562110

ದೂ. : 080-29566001, 080-27682035 ಇಮೇಲ್ : biaapa.devanahalli@gmail.com ವೆಬ್‌ಸೈಟ್ : www.biaapa.tpa.gov.in


ರ ಪ್ರಾಧಿಕಾರದ ಸಭೆಯ ನಡಾವಳಿಯ ರೀತ್ಯ ಹಾಗೂ ಉಲ್ಲೇಖ (15) ರ ಸರ್ಕಾರದ ಅಧಿಸೂಚನೆಯನ್ವಯ, ದೇವನಹಳ್ಳಿ ತಾಲ್ಲೂಕು, ವಿಜಯಪುರ ಹೋಬಳಿ, ಚಿಕ್ಕತತ್ತಮಂಗಲ ಗ್ರಾಮದ ಸರ್ವೆ ನಂ. 114/1 ರಲ್ಲಿ 0ಎ-29ಗು, 114/2 ರಲ್ಲಿ 1ಎ-11ಗು, 120 ರಲ್ಲಿ 4ಎ-38ಗು, 138 ರಲ್ಲಿ 2ಎ-00ಗು ಒಟ್ಟು 8ಎ-38ಗು ಅಥವಾ 36218.86 ಚ.ಮೀ ವಿಸ್ತೀರ್ಣ ಪ್ರದೇಶಕ್ಕೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 17 (2ಎ) ರನ್ವಯ ಈ ಕೆಳಕಂಡಂತೆ ಪರಿಷ್ಕೃತ ವಸತಿ ವಿನ್ಯಾಸ ನಕ್ಷೆಗೆ "ತಾತ್ಕಾಲಿಕ ಅನುಮೋದನೆ" ನೀಡಲು ಆದೇಶಿಸಲಾಗಿದೆ.

## ಆದೇಶ

ಸಂ. ಬಿಐಎಪಿಎ/ಟಿಪಿ/ಎಲ್‌ಎಒ/51/2022-23/2025-26/2489 ದಿನಾಂಕ: 09 DEC 2025

ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ (ತಿದ್ದುಪಡಿ) ಕಾಯ್ದೆ 2015 ರ ಕಲಂ 17(2) (ಎ) ರಡಿಯಲ್ಲಿ ದೇವನಹಳ್ಳಿ ತಾಲ್ಲೂಕು, ವಿಜಯಪುರ ಹೋಬಳಿ, ಚಿಕ್ಕತತ್ತಮಂಗಲ ಗ್ರಾಮದ ಸರ್ವೆ ನಂ. 114/1 ರಲ್ಲಿ 0ಎ-29ಗು, 114/2 ರಲ್ಲಿ 1ಎ-11ಗು, 120 ರಲ್ಲಿ 4ಎ-38ಗು, 138 ರಲ್ಲಿ 2ಎ-00ಗು ಒಟ್ಟು 8ಎ-38ಗು ಅಥವಾ 36218.86 ಚ.ಮೀ ವಿಸ್ತೀರ್ಣ ಪ್ರದೇಶವನ್ನು ಮಟ್ಟ ಮಾಡುವುದು, ನೆಲಗಟ್ಟಿ ಹಾಸುವುದು, ಜಲ್ಲಿಕಲ್ಲನ್ನು ಹಾಸುವುದು, ಕಲ್ಲುಚಪ್ಪಡಿ ಹಾಕುವುದು, ನಾಲೆಗಳ ನಿರ್ಮಾಣ, ಚರಂಡಿಗಳ ನಿರ್ಮಾಣ, ಮೋರಿಗಳ ನಿರ್ಮಾಣ, ಬೀದಿ ದೀಪದ ವ್ಯವಸ್ಥೆ ಮತ್ತು ನೀರು ಸರಬರಾಜಿಗೆ ಮಾಡಬೇಕಾದ ವ್ಯವಸ್ಥೆಗಳನ್ನೊಳಗೊಂಡಂತೆ ನಿವೇಶನಗಳು, ನಾಗರೀಕ ಸೌಲಭ್ಯದ ನಿವೇಶನ ಪ್ರದೇಶ, ರಸ್ತೆ ಪಂಕ್ತೀಕರಣ, ಉದ್ಯಾನವನ ಮತ್ತು ಮಳೆನೀರು ಸಂಗ್ರಹಣೆ ಘಟಕ (Rain water Harvesting), ಘನತ್ಯಾಜ್ಯ ನೀರು ಸಂಸ್ಕರಣಾ ಘಟಕ (Sewage Treatment Plant)/ ಸೋಕ್‌ಪಿಟ್ (Soak pit) ಮತ್ತು ಯಾವುದೇ ಇತರೆ ಮೂಲ ಸೌಕರ್ಯವನ್ನು ತೋರಿಸಿ ಗಡಿ ನಿರ್ಧಾರ ಮತ್ತು ಅಭಿವೃದ್ಧಿ ಉದ್ದೇಶಗಳಿಗಾಗಿ ಮಾತ್ರ ಈ ಕೆಳಕಂಡ ನಿಬಂಧನೆಗಳಿಗೆ ಒಳಪಡಿಸಿ, ಪರಿಷ್ಕೃತ ವಸತಿ ವಿನ್ಯಾಸ ನಕ್ಷೆಗೆ "ತಾತ್ಕಾಲಿಕ ಅನುಮೋದನೆ" ನೀಡಲಾಗಿದೆ.

### -: ನಿಬಂಧನೆಗಳು :-

1) ಈ ಕಛೇರಿಯ ಪತ್ರ ಸಂಖ್ಯೆ: ಬಿಐಎಪಿಎ/ಟಿಪಿ/ಎಲ್‌ಎಒ/51/2022-23/2274, ದಿನಾಂಕ: 07/01/2023 ರಂದು ತಾತ್ಕಾಲಿಕ ಅನುಮೋದನೆ ನೀಡಲಾದ ವಸತಿ ವಿನ್ಯಾಸ ನಕ್ಷೆಯನ್ನು ರದ್ದುಪಡಿಸಲಾಗಿದೆ.
2) ತಾತ್ಕಾಲಿಕ ಪರಿಷ್ಕೃತ ವಸತಿ ವಿನ್ಯಾಸ ನಕ್ಷೆ ಮಂಜೂರಾತಿಯ ಅವಧಿಯು ಮಂಜೂರಾತಿ ನೀಡಿದ ದಿನದಿಂದ 02 ವರ್ಷಗಳವರೆಗೆ ಮಾತ್ರ ಜಾರಿಯಲ್ಲಿರುತ್ತದೆ. ಈ ಅವಧಿಯಲ್ಲಿ ವಸತಿ ವಿನ್ಯಾಸ ಅಭಿವೃದ್ಧಿ ಕಾರ್ಯ ಪೂರ್ಣಗೊಳಿಸದಿದ್ದಲ್ಲಿ ತಾತ್ಕಾಲಿಕ ಅನುಮೋದಿತ ಪರಿಷ್ಕೃತ ವಸತಿ ವಿನ್ಯಾಸ ನಕ್ಷೆ ಅನುಮತಿಯನ್ನು ನವೀಕರಿಸಿಕೊಳ್ಳತಕ್ಕದ್ದು.
3) ಪ್ರಾಧಿಕಾರಕ್ಕೆ ಸಮಾಧಾನವಾಗುವಂತೆ ಮಟ್ಟ ಮಾಡುವುದು, ನೆಲಗಟ್ಟು ಹಾಸುವುದು, ಜಲ್ಲಿಕಲ್ಲನ್ನು ಹಾಸುವುದು, ಕಲ್ಲು ಚಪ್ಪಡಿ ಹಾಕುವುದು, ನಾಲೆಗಳ ನಿರ್ಮಾಣ, ಚರಂಡಿಗಳ ನಿರ್ಮಾಣ, ಮೋರಿಗಳ ನಿರ್ಮಾಣ, ಬೀದಿದೀಪದ ವ್ಯವಸ್ಥೆ ಮತ್ತು ನೀರು ಸರಬರಾಜಿಗೆ ಮಾಡಬೇಕಾದ ವ್ಯವಸ್ಥೆಯನ್ನೊಳಗೊಂಡಂತೆ ನಿವೇಶನಗಳು, ರಸ್ತೆ ಪಂಕ್ತೀಕರಣ, ಉದ್ಯಾನವನ ಹಾಗೂ ನಾಗರೀಕ ಸೌಲಭ್ಯ ಪ್ರದೇಶ ಮತ್ತು ಯಾವುದೇ ಇತರೆ ಮೂಲ ಸೌಕರ್ಯವನ್ನು ತೋರಿಸಿ, ಗಡಿ ನಿರ್ಧಾರ ಮತ್ತು ಅಭಿವೃದ್ಧಿ ಉದ್ದೇಶಗಳಿಗಾಗಿ ನಿಯಮಿಸಬಹುದಾದ ಅಂಥ ನಿಯಮಗಳಿಗೆ ಅನುಸಾರವಾಗಿ ತಾತ್ಕಾಲಿಕ ವಿನ್ಯಾಸ ನಕ್ಷೆಗೆ ಮಂಜೂರಾತಿಯನ್ನು ನೀಡಲಾಗಿದೆ.
4) ತಾತ್ಕಾಲಿಕ ಅನುಮೋದನೆ ಆಗಿರುವ ಪರಿಷ್ಕೃತ ವಸತಿ ವಿನ್ಯಾಸ ನಕ್ಷೆಯ ರೀತ್ಯ ಮಾಲೀಕನು ಯಾವುದೇ ಪರಿಹಾರವನ್ನು ಕ್ಲೇಮು ಮಾಡದೆಯೇ ಉಚಿತವಾಗಿ ನೋಂದಾಯಿತ ಪರಿತ್ಯಾಜನಾ ಪತ್ರದ ಮುಖಾಂತರ ನಾಗರೀಕ ಸೌಲಭ್ಯ ಪ್ರದೇಶಗಳನ್ನು ಈ ಪ್ರಾಧಿಕಾರಕ್ಕೆ ಹಾಗೂ ಸಾರ್ವಜನಿಕ ಉಪಯೋಗದ ಉದ್ಯಾನವನ ಮತ್ತು ರಸ್ತೆಗಳನ್ನು ಸಂಬಂಧಿಸಿದ ಸ್ಥಳೀಯ ಸಂಸ್ಥೆಗೆ ಹಸ್ತಾಂತರಿಸತಕ್ಕದ್ದು, ನಾಗರೀಕ ಸೌಲಭ್ಯ ನಿವೇಶನಗಳಿಗೆ ಮತ್ತು ಉದ್ಯಾನವನ ಪ್ರದೇಶಗಳಿಗೆ Chain Link Fencing ಅಳವಡಿಸಿ ಸಂರಕ್ಷಿಸತಕ್ಕದ್ದು.

5) ಸಂಬಂಧಪಟ್ಟ ಪ್ರಾಧಿಕಾರದ/ಮಂಡಳಿ/ಇಲಾಖೆಯ ಮೇಲ್ವಿಚಾರಣೆಯ ಅಡಿಯಲ್ಲಿ, ಮೇಲೆ ಹೇಳಲಾದ ಎಲ್ಲಾ ಮೂಲ ಸೌಕರ್ಯಗಳನ್ನು ಒಳಗೊಂಡ ಎಲ್ಲಾ ಅಭಿವೃದ್ಧಿ ಕಾಮಗಾರಿಗಳು ಪೂರ್ಣಗೊಂಡಿರುವುದನ್ನು ಖಚಿತಪಡಿಸಿಕೊಳ್ಳಲು ಮತ್ತು ಎಲ್ಲಾ ಅಭಿವೃದ್ಧಿ ಕಾಮಗಾರಿಗಳನ್ನು ಪೂರ್ಣಗೊಳಿಸಿದ್ದಕ್ಕಾಗಿ ಸಂಬಂಧಪಟ್ಟ ಪ್ರಾಧಿಕಾರ/ ಮಂಡಳಿ/ ಇಲಾಖೆಗಳಿಂದ ಕಾರ್ಯಪೂರ್ತಿ ಪ್ರಮಾಣ ಪತ್ರವನ್ನು ಪಡೆದು ಮತ್ತು ಸ್ಥಳೀಯ ಸಂಸ್ಥೆಗೆ ಉದ್ಯಾನವನ, ರಸ್ತೆ ಪ್ರದೇಶಗಳನ್ನು ಹಾಗೂ ಈ ಪ್ರಾಧಿಕಾರಕ್ಕೆ ನಾಗರೀಕ ಸೌಲಭ್ಯ ಪ್ರದೇಶಗಳನ್ನು ಬಿಟ್ಟುಕೊಡುವ ಬಗ್ಗೆ ದಾಖಲೆಗಳನ್ನು ಸಲ್ಲಿಸತಕ್ಕದ್ದು.

6) ಅನುಮೋದಿತ ತಾತ್ಕಾಲಿಕ ಪರಿಷ್ಕೃತ ವಸತಿ ವಿನ್ಯಾಸ ನಕ್ಷೆಯ ರೀತ್ಯ ಅನುಮೋದನೆ ನೀಡಿದ 02 ವರ್ಷಗಳೊಳಗಾಗಿ ಸಂಪೂರ್ಣವಾಗಿ ಉದ್ಯಾನವನ, ನಾಗರೀಕ ಸೌಲಭ್ಯಕ್ಕೆ ಮೀಸಲಿಟ್ಟ ಜಾಗ, ರಸ್ತೆಗಳು, ಒಳಚರಂಡಿ ವ್ಯವಸ್ಥೆ, ನೀರಿನ ಸೌಕರ್ಯ, ಸೋಕ್‌ಪಿಟ್(Soak pit), ಮಳೆನೀರು ಸಂಗ್ರಹ ಘಟಕ (Rain water Harvesting), Sewage Treatment Plant (ಘನತ್ಯಾಜ್ಯ ನೀರು ಸಂಸ್ಕರಣಾ ಘಟಕ), ವಿದ್ಯುತ್ ಸಂಪರ್ಕಗಳನ್ನು ಅಭಿವೃದ್ಧಿಪಡಿಸತಕ್ಕದ್ದು.

7) ಪರಿಷ್ಕೃತ ವಸತಿ ವಿನ್ಯಾಸದ ಗಡಿ ನಿರ್ಧಾರ ಮತ್ತು ಅಭಿವೃದ್ಧಿಪಡಿಸುವ ಉದ್ದೇಶಕ್ಕಾಗಿ ನಕ್ಷೆಯನ್ನು ಬಿಡುಗಡೆ ಮಾಡಲಾಗಿದ್ದು, ಪರಿಷ್ಕತ ವಸತಿ ವಿನ್ಯಾಸದಲ್ಲಿನ ನಿವೇಶಗಳನ್ನು ಪರಭಾರೆ ಮಾಡುವುದಾಗಲೀ ಮತ್ತು ಖಾತೆ ತೆರೆಯುವುದಾಗಲೀ ಮಾಡತಕ್ಕದ್ದಲ್ಲ. ಪರಿಷ್ಕೃತ ವಸತಿ ವಿನ್ಯಾಸದಲ್ಲಿನ ನಿವೇಶನಗಳಿಗೆ ಕಟ್ಟಡಗಳನ್ನು ನಿರ್ಮಿಸಲು ಪ್ರಾರಂಭಿಕ ಪ್ರಮಾಣ ಪತ್ರವನ್ನು ಅಥವಾ ಲೈಸೆನ್ಸನ್ನು ಮಂಜೂರು ಮಾಡತಕ್ಕದ್ದಲ್ಲ ಅಥವಾ ನೀಡತಕ್ಕದ್ದಲ್ಲ.

8) ರಿಯಲ್ ಎಸ್ಟೇಟ್ (ನಿಯಂತ್ರಣ ಮತ್ತು ಅಭಿವೃದ್ಧಿ) ಅಧಿನಿಯಮ–2016 ರ ಕಲಂ (3) ಮತ್ತು (4) ರ ರೀತ್ಯ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರ (RERA) ದಲ್ಲಿ ಪರಿಷ್ಕೃತ ವಸತಿ ಯೋಜನೆಯ ಪೂರ್ವಭಾವಿ ನೋಂದಣಿಯನ್ನು ಕಡ್ಡಾಯವಾಗಿ ಮಾಡತಕ್ಕದ್ದು.

9) ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣಾ ಮಂಡಳಿಯಿಂದ water (Prevention and Control of Pollution) Act 1974 ರ ಕಲಂ 25 ರ ರೀತ್ಯ ಸೂಕ್ತ ಪ್ರಮಾಣದ Sewage Treatment Plant (ತ್ಯಾಜ್ಯನೀರು ಸಂಸ್ಕರಣಾ ಘಟಕ) ಸ್ಥಾಪಿಸಲು Consent for Establishment ಪೂರ್ವಾನುಮತಿ ಪಡೆಯದೇ ಪ್ರಶ್ನಿತ ನಿವೇಶನ / ಜಾಗದಲ್ಲಿ ನೆಲ ಅಗೆಯುವಿಕೆ ಒಳಗೊಂಡಂತೆ ಯಾವುದೇ ರೀತಿಯ ಕಟ್ಟಡ ನಿರ್ಮಾಣ ಅಥವಾ ವಸತಿ ವಿನ್ಯಾಸ ಅಭಿವೃದ್ಧಿ ಕಾಮಗಾರಿಯನ್ನು ಕೈಗೊಳ್ಳತಕ್ಕದ್ದಲ್ಲ.

10) ಪ್ರಸ್ತಾವಿತ ಪರಿಷ್ಕೃತ ವಸತಿ ವಿನ್ಯಾಸದಲ್ಲಿನ ನಿವೇಶನದಾರರಿಗೆ ನೀರು ಸರಬರಾಜು, STP/ಸೆಪ್ಟಿಕ್ ಟ್ಯಾಂಕ್, ಮಳೆನೀರು ಸಂಗ್ರಹ ಘಟಕ (Rain water harvesting) ಮುಂತಾದ ಮೂಲಭೂತ ಸೌಕರ್ಯಗಳನ್ನು ಪರಿಷ್ಕೃತ ವಸತಿ ವಿನ್ಯಾಸದ ಮಾಲೀಕರು ಕಡ್ಡಾಯವಾಗಿ ಒದಗಿಸತಕ್ಕದ್ದು.

11) ಪ್ರಶ್ನಿತ ಜಮೀನುಗಳಲ್ಲಿ ಬರುವ ಸರ್ಕಾರಿ ಖರಾಬು ಜಾಗವನ್ನು ಯಥಾವತ್ತಾಗಿ ಕಾಯ್ದಿರಿಸತಕ್ಕದ್ದು ಹಾಗೂ ಈ ಜಾಗವನ್ನು ಒತ್ತುವರಿ ಮಾಡುವುದು ಅಥವಾ ಇತರೆ ಯಾವುದೇ ಉದ್ದೇಶಕ್ಕೆ ಬಳಸತಕ್ಕದ್ದಲ್ಲ.

12) ಅರ್ಜಿದಾರರು ಉದ್ದೇಶಿಸಿರುವ ಜಮೀನುಗಳಲ್ಲಿ ಸರ್ಕಾರದ ಅಥವಾ ಅನ್ಯಖಾಸಗಿ ಜಮೀನುಗಳೇನಾದರೂ ಸೇರಿಕೊಂಡಿರುವುದು ತಿಳಿದು ಬಂದಲ್ಲಿ ಅಂತಹ ಸಂದರ್ಭದಲ್ಲಿ ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ತಾತ್ಕಾಲಿಕ ಅನುಮೋದಿತ ವಸತಿ ವಿನ್ಯಾಸ ನಕ್ಷೆಯನ್ನು ಮಾರ್ಪಾಡು ಮಾಡಲು ಅಥವಾ ಹಿಂತೆಗೆದುಕೊಳ್ಳಲು ಅಧಿಕಾರವುಳ್ಳವರಾಗಿರುತ್ತಾರೆ.

13) ಈ ಅನುಮೋದನೆಯನ್ನು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 17 ರಡಿಯಲ್ಲಿ ನೀಡುತ್ತಿರುವುದರಿಂದ ಇದನ್ನು ಜಮೀನುಗಳ ಮೇಲಿರುವ ಹಕ್ಕನ್ನು ಅಥವಾ ಮಾಲೀಕತ್ವವನ್ನು ನಿರೂಪಿಸಲು ಉಪಯೋಗಿಸತಕ್ಕದ್ದಲ್ಲ.

14) ಪ್ರಶ್ನಿತ ಜಮೀನಿನಲ್ಲಿ ಉಪಖನಿಜಗಳಾದ ಮುರ್ರಂ ಮತ್ತು ಕಟ್ಟಡ ಕಲ್ಲುಗಳ ಕಾನೂನು ಬದ್ಧ ವಿಲೇವಾರಿಗೆ ಲಭ್ಯತೆ ಕಂಡುಬಂದಲ್ಲಿ ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಾವಳಿ 1944 ರ ತಿದ್ದುಪಡಿ 2023

ನಂ. 333/1, ಮೊದಲನೇ ಮಹಡಿ, ವಿ.ಜೆ. ಕಾಂಪ್ಲೆಕ್ಸ್, ಶಾಂತಿನಗರ, ಸೂಲಿಬೆಲೆ ರಸ್ತೆ, ದೇವನಹಳ್ಳಿ ಟೌನ್, ಬೆಂಗಳೂರು ಗ್ರಾಮಾಂತರ ಜಿಲ್ಲೆ-562110
ದೂ. : 080-29566001, 080-27682035 ಇಮೇಲ್ : biaapa.devanahalli@gmail.com ವೆಬ್‌ಸೈಟ್ : www.biaapa.tpa.gov.in


ನಿಯಮ 3-ಎ ಅನ್ವಯ ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಪೂರ್ವಾನುಮತಿಯನ್ನು ಕಡ್ಡಾಯವಾಗಿ ಪಡೆಯತಕ್ಕದ್ದು.

15) ಸದರಿ ಪರಿಷ್ಕೃತ ವಸತಿ ವಿನ್ಯಾಸದಲ್ಲಿರುವ ಯಾವುದೇ ನಿವೇಶನಗಳನ್ನು ಉಪವಿಭಜನೆ ಮಾಡಿ ಮಾರಾಟ ಮಾಡತಕ್ಕದ್ದಲ್ಲ, ಒಂದು ವೇಳೆ ಯಾವುದೇ ಬದಲಾವಣೆಯ ಅವಶ್ಯಕತೆ ಇದ್ದಲ್ಲಿ ಪ್ರಾಧಿಕಾರದಿಂದ ಅನುಮತಿ ಪಡೆಯತಕ್ಕದ್ದು, ಈ ಪ್ರಾಧಿಕಾರದ ಪೂರ್ವಾನುಮತಿ ಇಲ್ಲದೆ ಯಾವುದೇ ಬದಲಾವಣೆಯನ್ನು ಮಾಡಬಾರದು.

16) ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರವು ಮುಂದೆ ಸೂಚಿಸಬಹುದಾದ ಎಲ್ಲಾ ತಾಂತ್ರಿಕ ವಿಷಯಗಳಿಗೆ ಹಾಗೂ ಶುಲ್ಕಗಳನ್ನು ತುಂಬುವುದರ ನಿರ್ಣಯಕ್ಕೆ ಅರ್ಜಿದಾರರು ಬದ್ಧರಾಗಿರುವುದು.

17) ಸದರಿ ತಾತ್ಕಾಲಿಕ ಅನುಮೋದಿತ ಪರಿಷ್ಕೃತ ವಸತಿ ವಿನ್ಯಾಸದಲ್ಲಿನ ರಸ್ತೆ, ರಸ್ತೆಬದಿ ಚರಂಡಿ, ಕಲ್‌ವರ್ಟ್‌ಗಳು, ಪಾದಚಾರಿ ಮಾರ್ಗ ಇತ್ಯಾದಿ ಸಿವಿಲ್ ಕಾಮಗಾರಿಗಳನ್ನು ಸಂಬಂಧಿತ ಗ್ರಾಮೀಣಾ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಉಸ್ತುವಾರಿಯಲ್ಲಿ ಕಾರ್ಯಗತಗೊಳಿಸಿ, ದೃಢೀಕರಣ ಪತ್ರ ಸಲ್ಲಿಸತಕ್ಕದ್ದು.

18) ಸದರಿ ತಾತ್ಕಾಲಿಕ ಅನುಮೋದಿತ ಪರಿಷ್ಕೃತ ವಸತಿ ವಿನ್ಯಾಸದಲ್ಲಿನ ನೀರು ಸರಬರಾಜು ಮತ್ತು ಒಳಚರಂಡಿ ವ್ಯವಸ್ಥೆ ಕಾಮಗಾರಿಗಳನ್ನು ಸಂಬಂಧಿತ ಗ್ರಾಮೀಣಾ ನೀರು ಸರಬರಾಜು ಇಲಾಖೆ ಉಸ್ತುವಾರಿಯಲ್ಲಿ ಕಾರ್ಯಗತಗೊಳಿಸಿ ದೃಢೀಕರಣ ಪತ್ರ ಸಲ್ಲಿಸತಕ್ಕದ್ದು.

19) ಸದರಿ ತಾತ್ಕಾಲಿಕ ಅನುಮೋದಿತ ಪರಿಷ್ಕೃತ ವಸತಿ ವಿನ್ಯಾಸದಲ್ಲಿನ ವಿದ್ಯುದ್ಧೀಕರಣ ಕಾಮಗಾರಿಗಳನ್ನು ಸಂಬಂಧಿತ ಬೆಸ್ಕಾಂ ಮಂಡಳಿ ಉಸ್ತುವಾರಿಯಲ್ಲಿ ಕಾರ್ಯಗತಗೊಳಿಸಿ ದೃಢೀಕರಣ ಪತ್ರ ಸಲ್ಲಿಸತಕ್ಕದ್ದು.

20) ಪ್ರಸ್ತಾಪಿತ ಪರಿಷ್ಕೃತ ವಸತಿ ವಿನ್ಯಾಸದಲ್ಲಿ ಘನ ತ್ಯಾಜ್ಯಗಳನ್ನು ಹಸಿತ್ಯಾಜ್ಯ, ಒಣತ್ಯಾಜ್ಯ, ಪ್ಲಾಸ್ಟಿಕ್ ಮತ್ತು ಇತ್ಯಾದಿ ವಿಂಗಡಿಸಿ Compost ಮಾಡಲು ಸೂಕ್ತ ಸ್ಥಳವನ್ನು ಕಾಯ್ದಿರಿಸತಕ್ಕದ್ದು.

21) ಅಭಿವೃದ್ಧಿದಾರರು ಕೊಳಚೆ ನೀರನ್ನು ಬಯಲು ಜಾಗ/ಖಾಲಿ ಜಾಗಗಳಿಗೆ ಬಿಡದೇ ಸಂಸ್ಕರಿಸಿ ಕುಡಿಯುವ ನೀರಿನ ಹೊರತಾಗಿ ಅನ್ಯ ಉದ್ದೇಶಗಳಿಗೆ ಬಳಕೆ ಮಾಡತಕ್ಕದ್ದು.

22) ಅಭಿವೃದ್ಧಿದಾರರು ಉದ್ಯಾನವನಕ್ಕಾಗಿ ಕಾಯ್ದಿರಿಸಿರುವ ಪ್ರದೇಶದಲ್ಲಿ ವಿವಿಧ ಜಾತಿಯ ಗಿಡಮರಗಳನ್ನು ಬೆಳಸಿ ಅಭಿವೃದ್ಧಿಪಡಿಸುವುದು ಹಾಗೂ ಸದರಿ ಉದ್ದೇಶಕ್ಕಾಗಿ ಕಾಯ್ದಿರಿಸಿ ಉಪಯೋಗಿಸತಕ್ಕದ್ದು ಬೇರೆ ಯಾವುದೇ ಉದ್ದೇಶಗಳಿಗೆ ಬದಲಾಯಿಸಬಾರದು. ಈ ಪ್ರದೇಶದಲ್ಲಿ ಹಾಲಿ ಇರುವ ಗಿಡಮರಗಳನ್ನು ಸಾಧ್ಯವಾದಷ್ಟು ಮಟ್ಟಿಗೆ ಉಳಿಸಿಕೊಳ್ಳತಕ್ಕದ್ದು ಮತ್ತು ರಸ್ತೆಗಳ ಎರಡು ಕಡೆ ಗಿಡ/ಮರಗಳನ್ನು ಬೆಳೆಸುವುದು.

23) ತಾತ್ಕಾಲಿಕ ಅನುಮೋದಿತ ಪರಿಷ್ಕೃತ ವಸತಿ ವಿನ್ಯಾಸದ ಪ್ರದೇಶಗಳಲ್ಲಿ ಮಳೆ ನೀರು ಸಂಗ್ರಹಣೆಯನ್ನು ಕಡ್ಡಾಯವಾಗಿ ಅಳವಡಿಸುವುದು ಮತ್ತು ವಿನ್ಯಾಸದಲ್ಲಿ ಅಂತರ್ಜಲ ವೃದ್ಧಿಗೆ ಅಗತ್ಯ ಕ್ರಮಗಳನ್ನು ಕೈಗೊಳ್ಳುವುದು.

24) ಪರಿಷ್ಕೃತ ವಸತಿ ವಿನ್ಯಾಸದಲ್ಲಿನ ರಸ್ತೆಗಳಿಂದ ಅಕ್ಕ-ಪಕ್ಕದ ಜಮೀನುಗಳಿಗೆ ಸಂಪರ್ಕವನ್ನು ಯಾವುದೇ ಕಾರಣಕ್ಕೂ ನಿರ್ಬಂಧಿಸತಕ್ಕದ್ದಲ್ಲ.

25) ಸದರಿ ಜಮೀನುಗಳಿಗೆ ಸಂಬಂಧಿಸಿದಂತೆ ಯಾವುದೇ ಸಿವಿಲ್ ವ್ಯಾಜ್ಯಗಳಿಗೆ ಈ ಪ್ರಾಧಿಕಾರವು ಜವಾಬ್ದಾರಿಯಾಗಿರುವುದಿಲ್ಲ.

26) ತಾತ್ಕಾಲಿಕ ಪರಿಷ್ಕೃತ ವಸತಿ ವಿನ್ಯಾಸ ಅನುಮೋದನೆ ಕೋರಿಕೆ ಸಂಬಂಧ ಸಲ್ಲಿಸಲಾಗಿರುವ ದಾಖಲೆ ಅಥವಾ ಬೇರೆ ಯಾವುದೇ ಮಾಹಿತಿಗಳು ತಪ್ಪಾಗಿದ್ದಲ್ಲಿ ಪರಿಷ್ಕೃತ ವಸತಿ ವಿನ್ಯಾಸ ನಕ್ಷೆಗೆ ನೀಡಿರುವ ತಾತ್ಕಾಲಿಕ ಅನುಮೋದನೆ ತಂತಾನೇ ಸ್ವಯಂಚಾಲಿತವಾಗಿ ರದ್ದಾಗುತ್ತದೆ.

27) ಸರ್ಕಾರದ ಸುತ್ತೋಲೆ ಸಂಖ್ಯೆ: ನಅಇ 209 ಬಿಎಂಆರ್ 2016, ದಿನಾಂಕ: 31/03/2017 ರ ರೀತ್ಯ ಪತ್ರಿಕೆ, ಮಾಧ್ಯಮ, ಜಾಹಿರಾತು ಪ್ರಕಟಣೆಗಳಲ್ಲಿ ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಹೆಸರನ್ನು ದುರ್ಬಳಕೆ ಮಾಡಿಕೊಳ್ಳುವಂತಿಲ್ಲ. ತಪ್ಪು ಮಾಹಿತಿ ಪ್ರಕಟಿಸದೇ ಅನುಮೋದನೆ ಮಾಡಿಕೊಂಡಿರುವ ಯೋಜನಾ ಪ್ರಾಧಿಕಾರದ ಹೆಸರನ್ನು ಮಾತ್ರ ನಮೂದಿಸತಕ್ಕದ್ದು.

28) ಮೇಲಿನಂತೆ ನೀಡಿರುವ ಅನುಮತಿಗೆ ವ್ಯತಿರಿಕ್ತವಾಗಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಂಡಲ್ಲಿ ನಿಯಮಾನುಸಾರ ಸೂಕ್ತ ಕ್ರಮ ಜರುಗಿಸಲಾಗುವುದು.

29) ನೈಸರ್ಗಿಕವಾಗಿ ಹರಿಯುವ ನದಿ/ಹಳ್ಳ/ಕೆರೆ/ನಾಲಾ ಮುಂತಾದವುಗಳಿಗೆ ವಿನ್ಯಾಸದ ಮಲೀನ ನೀರನ್ನು ಬಿಡಬಾರದು. ಸದರಿ ವಸತಿ ವಿನ್ಯಾಸ ನಕ್ಷೆಯಲ್ಲಿ ಸೂಚಿಸಲಾಗಿರುವ ನಾಲಾ ಪ್ರದೇಶಗಳಲ್ಲಿ ರಸ್ತೆ ಪರಿಚಲನೆಯನ್ನು ಮುಂದುವರಿಸುವಾಗ ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರದಿಂದ ಪೂರ್ವಾನುಮತಿ ಪಡೆದು ಕಲ್ವರ್ಟ್ ಕಟ್ಟತಕ್ಕದ್ದು, ಹಾಗೂ ನೀರಿನ ಹರಿವಿಗಾಗಿ ಯಾವುದೇ ಅಡಚಣೆ ಮಾಡತಕ್ಕದ್ದಲ್ಲ, ಹಾಗೂ ಸೂಕ್ತ ಡ್ರೈನೇಜ್ ನಿರ್ಮಿಸಿ ಸಂರಕ್ಷಿಸತಕ್ಕದ್ದು, ಹಾಗೂ ಯಾವುದೇ ಒತ್ತುವರಿ ಮಾಡತಕ್ಕದ್ದಲ್ಲ. ಸರ್ಕಾರದ ಅಧಿಸೂಚನೆ ಸಂ. ಯುಡಿಡಿ15ಟಿಟಿಪಿ2015, ದಿನಾಂಕ: 21/04/2020 ರ ರೀತ್ಯ ಜಲಪ್ರದೇಶಗಳ ಬಫರ್ ಜಾಗದಲ್ಲಿ water pumping stations, Walking tracks, Play fields without any building constructions, cycling trucks & Parks ಗಳನ್ನು ಮಾತ್ರ ಅಭಿವೃದ್ಧಿಪಡಿಸತಕ್ಕದ್ದು.

30) ಮೇಲ್ಕಂಡ ಯಾವುದೇ ಷರತ್ತುಗಳನ್ನು ಹಾಗೂ ಇತರೆ ಯಾವುದೇ ಪ್ರಾಧಿಕಾರವು ವಿಧಿಸಿರುವ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ ಪ್ರಾಧಿಕಾರವು ನೀಡಿರುವ ಮಂಜೂರಾತಿಯು ಕೂಡಲೇ ರದ್ದಾಗುವುದು.

ಅರ್ಜಿದಾರರು ಪರಿಷ್ಕೃತ ವಿನ್ಯಾಸದಲ್ಲಿನ ಕಾಮಗಾರಿಗಳನ್ನು ಒಟ್ಟಾರೆಯಾಗಿ ಅಭಿವೃದ್ಧಿಪಡಿಸಿದ ನಂತರ, ಸದರಿ ಪರಿಷ್ಕೃತ ವಸತಿ ವಿನ್ಯಾಸ ನಕ್ಷೆಗೆ ಅಂತಿಮ ಅನುಮೋದನೆ ಪಡೆಯುವ ಪೂರ್ವದಲ್ಲಿ ಪರಿಷ್ಕೃತ ವಸತಿ ವಿನ್ಯಾಸದಲ್ಲಿನ ಉದ್ಯಾನವನ ಬಯಲು ಪ್ರದೇಶ ಹಾಗೂ ರಸ್ತೆಗಳನ್ನು ಸಂಬಂಧಿಸಿದ ಸ್ಥಳೀಯ ಸಂಸ್ಥೆಗೆ ಹಾಗೂ ನಾಗರೀಕ ಸೌಲಭ್ಯ ನಿವೇಶನವನ್ನು ಈ ಪ್ರಾಧಿಕಾರಕ್ಕೆ ನೋಂದಾಯಿತ ಪರಿತ್ಯಾಜನಾ ಪತ್ರಗಳ ಮುಖಾಂತರ ಪ್ರತ್ಯೇಕವಾಗಿ, ಮುಕ್ತಟಿಯಾಗಿ ಹಸ್ತಾಂತರಿಸಿ, ಅಭಿವೃದ್ಧಿ ಕಾಮಗಾರಿಗಳನ್ನು ಪೂರ್ಣಗೊಳಿಸಿರುವ ಬಗ್ಗೆ ವಿವಿಧ ಇಲಾಖೆಗಳಿಂದ ಅಂದರೆ ನೀರು ಸರಬರಾಜು, ಒಳಚರಂಡಿ Soak pit ಅಭಿವೃದ್ಧಿಪಡಿಸಿರುವ ಬಗ್ಗೆ ಗ್ರಾಮೀಣ ನೀರು ಸರಬರಾಜು ಇಲಾಖೆಯಿಂದ, ರಸ್ತೆ ಕಾಮಗಾರಿಗಳು, ಮಳೆನೀರು ಚರಂಡಿ ಕಾಮಗಾರಿಗಳಿಗೆ ಸಂಬಂಧಿಸಿದಂತೆ ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯಿಂದ, ವಿದ್ಯುತ್ ಸರಬರಾಜು ಮಾಡಿರುವ ಬಗ್ಗೆ ಬೆಸ್ಕಾಂನಿಂದ, ಉದ್ಯಾನವನ ಅಭಿವೃದ್ಧಿಪಡಿಸಿರುವ ಬಗ್ಗೆ ತೋಟಗಾರಿಕೆ ಇಲಾಖೆಯಿಂದ, ಎಲ್ಲಾ ಕಾಮಗಾರಿಗಳನ್ನು ಪೂರ್ಣಗೊಳಿಸಿರುವ ಬಗ್ಗೆ ಹಾಗೂ ಪರಿಷ್ಕೃತ ವಸತಿ ವಿನ್ಯಾಸದಲ್ಲಿ ಮೂಲಭೂತ ಸೌಲಭ್ಯಗಳು ಮತ್ತು ಸಾರ್ವಜನಿಕ ಪ್ರದೇಶಗಳ ನಿರ್ವಹಣೆ ಬಗ್ಗೆ ಸ್ಥಳೀಯ ಸಂಸ್ಥೆಯಿಂದ ಕಾಮಗಾರಿ ಮುಕ್ತಾಯ ಪತ್ರವನ್ನು ಪಡೆದು ಸಲ್ಲಿಸಿ, ಪರಿಷ್ಕೃತ ವಸತಿ ವಿನ್ಯಾಸ ನಕ್ಷೆಗೆ ಅಂತಿಮ ಅನುಮೋದನೆ ಹಾಗೂ ನಿವೇಶನ ಬಿಡುಗಡೆಗೆ ಮನವಿ ಸಲ್ಲಿಸತಕ್ಕದ್ದು.

ಸಹಿ/-
ನಗರ ಮತ್ತು ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು
ಹಾಗೂ ಸದಸ್ಯ ಕಾರ್ಯದರ್ಶಿಗಳು,
ಬೆಂಗಳೂರು ಅಂತರಾಷ್ಟ್ರೀಯ ವಿಮಾನ
ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ,
ದೇವನಹಳ್ಳಿ

ಲಗತ್ತು:-
ಗಡಿ ನಿರ್ಧಾರ ಮತ್ತು ಅಭಿವೃದ್ಧಿ ಕಾರ್ಯ
ಕೈಗೊಳ್ಳಲು ಮಾತ್ರ ನೀಡಲಾಗಿರುವ ತಾತ್ಕಾಲಿಕ
ಪರಿಷ್ಕೃತ ವಸತಿ ವಿನ್ಯಾಸ ನಕ್ಷೆ.

ರವರಿಗೆ,
ಮೆ॥ ಬ್ಲ್ಯೂಸ್ಟೋನ್ ಪ್ರಾಪರ್ಟೀಸ್ ರ ಪರವಾಗಿ
ಪಾಲುದಾರರಾದ ಶ್ರೀ ಸುನಿಲ್ ಎ ಬಿನ್ ಎನ್.ಆಂಜಿನಪ್ಪ
ಹಾಗೂ ಭೂ ಮಾಲೀಕರಾದ ಶ್ರೀ ಕೇಶವ ಬಿನ್
ಪಿ.ರಾಮಚಂದ್ರಪ್ಪ ರವರ ಪರವಾಗಿ ನೋಂದಾಯಿತ
ಜಿಪಿಎದಾರರು ಮೆ॥ ಬ್ಲ್ಯೂಸ್ಟೋನ್ ಪ್ರಾಪರ್ಟೀಸ್ ರ
ಪರವಾಗಿ ಪಾಲುದಾರರಾದ ಶ್ರೀ ಸುನಿಲ್ ಎ ಬಿನ್
ಎನ್.ಆಂಜಿನಪ್ಪ,
ನಂ. 82/83, 11ನೇ ಮೈನ್ ರೋಡ್, ಬಾಲಾಜಿನಗರ,
ಮಲ್ಲತ್ತಹಳ್ಳಿ, ಬೆಂಗಳೂರು-560056.

<u>ಪ್ರತಿಯನ್ನು:</u>

1) **ಭೂದಾಖಲೆಗಳ ಸಹಾಯಕ ನಿರ್ದೇಶಕರು, ದೇವನಹಳ್ಳಿ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ,** ಇವರಿಗೆ ತಾತ್ಕಾಲಿಕ ಅನುಮೋದಿತ ಪರಿಷ್ಕೃತ ವಸತಿ ವಿನ್ಯಾಸ ನಕ್ಷೆಯ ಪ್ರತಿಯನ್ನು ಕಳುಹಿಸಿದ್ದು, ದೃಢೀಕೃತ ಸರ್ವೆ ನಕ್ಷೆಯನ್ವಯ ಪರಿಷ್ಕೃತ ವಸತಿ ವಿನ್ಯಾಸ ನಕ್ಷೆಗೆ ತಾತ್ಕಾಲಿಕ ಅನುಮೋದನೆಗಾಗಿ ಪರಿಗಣಿಸಲಾಗಿದ್ದು, ದೃಢೀಕೃತ ಸರ್ವೆ ನಕ್ಷೆಯಂತೆ ಅನುಗುಣವಾಗಿ ಇಲ್ಲದಿದ್ದಲ್ಲಿ ಅಥವಾ ಯಾವುದೇ ಸರ್ಕಾರಿ ಜಮೀನು ಒಳಗೊಂಡಿದ್ದಲ್ಲಿ ಈ ಪ್ರಾಧಿಕಾರಕ್ಕೆ ಮಾಹಿತಿ ನೀಡಲು ಹಾಗೂ ತಾತ್ಕಾಲಿಕ ಅನುಮೋದನೆ ನೀಡಲಾದ ಪರಿಷ್ಕೃತ ವಸತಿ ವಿನ್ಯಾಸದಂತೆ ಯಾವುದೇ ಕೆರೆ / ಖರಾಬು ಒತ್ತುವರಿ ಆಗಿಲ್ಲದೇ ಇರುವ ಬಗ್ಗೆ ಮಾಹಿತಿ ನೀಡಲು ಕೋರಿದೆ. ತಮ್ಮ ವತಿಯಿಂದ ಯಾವುದೇ ಮಾಹಿತಿ ಸ್ವೀಕೃತಗೊಂಡಿಲ್ಲದ ಪಕ್ಷದಲ್ಲಿ ದಾಖಲೆಯಂತೆ ಪರಿಷ್ಕೃತ ವಸತಿ ವಿನ್ಯಾಸ ಅನುಮೋದನೆಯು ಸರಿಯಾಗಿರುತ್ತದೆ ಎಂದು ತಿಳಿದು ಮುಂದಿನ ಕ್ರಮಕ್ಕೆಗೊಳ್ಳಲಾಗುವುದೆಂಬ ಅಂಶವನ್ನು ತಮ್ಮ ಗಮನಕ್ಕೆ ತರಲಾಗಿದೆ.
2) **ಉಪನೋಂದಣಾಧಿಕಾರಿಗಳು, ದೇವನಹಳ್ಳಿ ತಾಲ್ಲೂಕು,** ಇವರಿಗೆ ಕಳುಹಿಸುತ್ತಾ ಪರಿಷ್ಕೃತ ವಸತಿ ವಿನ್ಯಾಸ ನಕ್ಷೆಗೆ ತಾತ್ಕಾಲಿಕ ಅನುಮೋದನೆ ಮಾತ್ರ ನೀಡಲಾಗಿದ್ದು, ಪ್ರಸ್ತಿತ ಪರಿಷ್ಕೃತ ವಸತಿ ವಿನ್ಯಾಸ ನಕ್ಷೆಗೆ ಅಂತಿಮ ಅನುಮೋದನೆ ನೀಡಿ ನಿವೇಶನಗಳನ್ನು ಬಿಡುಗಡೆಗೊಳಿಸುವವರೆಗೂ ಸದರಿ ಪರಿಷ್ಕೃತ ವಸತಿ ವಿನ್ಯಾಸದಲ್ಲಿನ ಯಾವುದೇ ನಿವೇಶನಗಳಿಗೆ ನೋಂದಣಿ ಮಾಡಬಾರದೆಂದು ಈ ಮೂಲಕ ಸೂಚಿಸಲಾಗಿದೆ.
3) **ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಮಂಡಿಬೆಲೆ ಗ್ರಾಮ ಪಂಚಾಯಿತಿ** ಇವರಿಗೆ ತಾತ್ಕಾಲಿಕ ಅನುಮೋದನೆ ನಕ್ಷೆಯ ಪ್ರತಿಯನ್ನು ಕಳುಹಿಸುತ್ತಾ ಪರಿಷ್ಕೃತ ವಸತಿ ವಿನ್ಯಾಸ ನಕ್ಷೆಗೆ ತಾತ್ಕಾಲಿಕ ಅನುಮೋದನೆ ಮಾತ್ರ ನೀಡಲಾಗಿದ್ದು, ಪ್ರಸ್ತಿತ ಪರಿಷ್ಕೃತ ವಸತಿ ವಿನ್ಯಾಸ ನಕ್ಷೆಗೆ ಅಂತಿಮ ಅನುಮೋದನೆ ನೀಡಿ ನಿವೇಶನಗಳನ್ನು ಬಿಡುಗಡೆಗೊಳಿಸುವವರೆಗೂ ಸದರಿ ಪರಿಷ್ಕೃತ ವಸತಿ ವಿನ್ಯಾಸದಲ್ಲಿನ ಯಾವುದೇ ನಿವೇಶನಗಳಿಗೆ ಖಾತಾ ನೋಂದಣಿ ಮಾಡಬಾರದೆಂದು ಈ ಮೂಲಕ ಸೂಚಿಸಲಾಗಿದೆ.
4) **ಕಾರ್ಯದರ್ಶಿ, ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರ,** ನಂ. 1/14, 2 ನೇ ಮಹಡಿ, ಸಿಲ್ವರ್ ಜ್ಯೂಬಿಲಿ ಬ್ಲಾಕ್, ಯುನಿಟಿ ಬಿಲ್ಡಿಂಗ್, ಸಿ.ಎಸ್.ಐ ಕಾಂಪೌಂಡ್, 3 ನೇ ಕ್ರಾಸ್ ಮಿಷನ್ ರಸ್ತೆ, ಬೆಂಗಳೂರು–560027 ಇವರ ಮಾಹಿತಿಗಾಗಿ ಕಳುಹಿಸಿದೆ.
5) **ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ, ದೇವನಹಳ್ಳಿ ಉಪವಿಭಾಗ** ಇವರಿಗೆ ಪರಿಷ್ಕೃತ ತಾತ್ಕಾಲಿಕ ಅನುಮೋದನೆ ನಕ್ಷೆಯ ಪ್ರತಿಯನ್ನು ಮುಂದಿನ ಕ್ರಮಕ್ಕಾಗಿ ಕಳುಹಿಸಿದೆ.
6) **ಸಹಾಯಕ ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ,** ದೇವನಹಳ್ಳಿ ಇವರಿಗೆ ಪರಿಷ್ಕೃತ ತಾತ್ಕಾಲಿಕ ಅನುಮೋದನೆ ನಕ್ಷೆಯ ಪ್ರತಿಯನ್ನು ಮುಂದಿನ ಕ್ರಮಕ್ಕಾಗಿ ಕಳುಹಿಸಿದೆ.
7) **ಸಹಾಯಕ ಕಾರ್ಯಪಾಲಕ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ,** ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಜಿಲ್ಲಾಧಿಕಾರಿಗಳ ಕಛೇರಿ ಆವರಣ, ಚಪ್ಪರದಕಲ್ಲು (ಬೀರಸಂದ್ರ) ದೇವನಹಳ್ಳಿ ತಾಲ್ಲೂಕು–562110 ಇವರಿಗೆ ಪರಿಷ್ಕೃತ ತಾತ್ಕಾಲಿಕ ಅನುಮೋದನೆ ನಕ್ಷೆಯ ಪ್ರತಿಯನ್ನು ಮುಂದಿನ ಕ್ರಮಕ್ಕಾಗಿ ಕಳುಹಿಸಿದೆ.
8) **ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು, ಜಿಲ್ಲಾ ಪಂಚಾಯತ್,** ಯಲಹಂಕ ಇವರಿಗೆ ಪರಿಷ್ಕೃತ ತಾತ್ಕಾಲಿಕ ಅನುಮೋದನೆ ನಕ್ಷೆಯ ಪ್ರತಿಯನ್ನು ಮುಂದಿನ ಕ್ರಮಕ್ಕಾಗಿ ಕಳುಹಿಸಿದೆ.
9) ಕಛೇರಿ ಪ್ರತಿ.

ನಗರ ಮತ್ತು ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು
**ಹಾಗೂ ಸದಸ್ಯ ಕಾರ್ಯದರ್ಶಿಗಳು,**
ಬೆಂಗಳೂರು ಅಂತರಾಷ್ಟ್ರೀಯ ವಿಮಾನ
ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ,
ದೇವನಹಳ್ಳಿ.